ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 02-03-2017

## ಪತ್ರಿಕಾ ಆಮಂತ್ರಣ

1. ವಿಶ್ವ ಶ್ರವಣ ದಿನ:

"ಕಿವುಡುತನವನ್ನು ನಿವಾರಣೆಗೊಳಿಸಲು ಪ್ರಬಲವಾದ ಕಾರ್ಯತಂತ್ರ ರೂಪಿಸುವುದು"

ಉದ್ಘಾಟನೆ:

ಶ್ರೀ ಕೆ.ಆರ್. ರಮೇಶ್‌ಕುಮಾರ್,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ದಿನಾಂಕ: 3-3-2017 ಸಮಯ ಬೆಳಿಗ್ಗೆ 10.00 ಗಂಟೆಗೆ

ಮುಖ್ಯ ಅತಿಥಿಗಳು:

ಡಾ: ಶಾಲಿನಿ ರಜನೀಶ್,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,

ಸ್ಥಳ: ಸರ್ಕಾರಿ ಕ್ಷೇತ್ರೀಯ ಮಾದರಿ ಪ್ರಾಥಮಿಕ ಪಾಠ ಶಾಲೆ, ಹೆಬ್ಬಾಳ, ಬೆಂಗಳೂರು

2. ಕರ್ನಾಟಕ ಚಲನಚಿತ್ರ ಅಕಾಡೆಮಿ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ:

ಉದ್ಘಾಟನೆ:

ಶ್ರೀಮತಿ ಉಮಾಶ್ರೀ

ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರು

ಪ್ರಶಸ್ತಿ ಪ್ರದಾನ:

ಎಂ. ಕೃಷ್ಣಪ್ಪ,

ವಸತಿ ಸಚಿವರು,

ಡಾ: ಹೆಚ್.ಎಚ್. ಅಂಬರೀಶ್,
ಹಿರಿಯ ಕಲಾವಿದರು ಮತ್ತು ಮಾಜಿ ಸಚಿವರು

ಮುಖ್ಯ ಅತಿಥಿಗಳು:
ಡಾ: ಜಯಮಾಲ,
ಹಿರಿಯ ಕಲಾವಿದರು ಹಾಗೂ ವಿಧಾನ ಪರಿಷತ್ ಸದಸ್ಯರು
ಡಾ: ಭಾರತಿ ವಿಷ್ಣುವರ್ಧನ್,
ಹಿರಿಯ ಕಲಾವಿದರು
ವಿ. ರವೀಚಂದ್ರನ್,
ಹಿರಿಯ ಕಲಾವಿದರು
ಎನ್.ಆರ್. ವಿಶುಕುಮಾರ್,
ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ದಿನಾಂಕ: 03-02-2017 ಶುಕ್ರವಾರ ಸಮಯ: ಸಂಜೆ 5-45 ಗಂಟೆಗೆ
ಸ್ಥಳ: ಸರ್.ಪುಟ್ಟಣ್ಣಚೆಟ್ಟಿ ಪುರಭವನ, ಜೆ.ಸಿ. ರಸ್ತೆ, ಬೆಂಗಳೂರು

## ಪತ್ರಿಕಾ ಪ್ರಕಟಣೆ

# ಮೇ ಅಂತ್ಯದವರೆಗೆ ಬೆಂಗಳೂರು ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ ಇಲ್ಲ

**ಬೆಂಗಳೂರು, ಮಾರ್ಚ್ 2, (ಕರ್ನಾಟಕ ವಾರ್ತೆ)**

**ಕಾವೇರಿ ನದಿ ಪಾತ್ರದ ಜಲಾಶಯಗಳಲ್ಲಿ ನೀರಿನ ಸಂಗ್ರಹ ಕಡಿಮೆ ಇದ್ದರೂ ಬೆಂಗಳೂರು ನಗರಕ್ಕೆ ಮೇ ತಿಂಗಳ ಅಂತ್ಯದವರೆಗೆ ಕುಡಿಯುವ ನೀರಿಗೆ ತೊಂದರೆಯಾಗುವುದಿಲ್ಲ ಎಂದು ಬೆಂಗಳೂರು ನಗರಾಭಿವೃದ್ದಿ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.**

**ಬೆಂಗಳೂರು ನಗರದ ಕುಡಿಯುವ ನೀರಿನ ಸಮಸ್ಯೆ ಕುರಿತು ಚರ್ಚಿಸಲು ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕರೆಯಲಾಗಿದ್ದ ಬೆಂಗಳೂರು ನಗರ ವ್ಯಾಪ್ತಿಯ ಚುನಾಯಿತ ಜನಪ್ರತಿನಿಧಿಗಳ ಸಭೆಯ ನಂತರ ಸುದ್ಧಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು ಬೆಂಗಳೂರಿನ ನಾಗರಿಕರು ನೀರನ್ನು ಮಿತವಾಗಿ ಬಳಸುವಂತೆ ಮನವಿ ಮಾಡಿದರು.**

ನೀರಿನ ಸಮಸ್ಯೆಗಳಿರುವ  ಕಡೆ ತುರ್ತಾಗಿ ಉತ್ತಮ ನೀರು ಸರಬರಾಜು ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ ಸಚಿವರು, ಕೆಲವು ಖಾಸಗಿ ನೀರಿನ ಟ್ಯಾಂಕರ್ ಅವರು ನೀರು ಸರಬರಾಜು ಮಾಡುತ್ತಿದ್ದಾರೆ, ತಕ್ಷಣ ಆ ಪದ್ಧತಿಯನ್ನು ನಿಲ್ಲಿಸಿದರೆ ತೊಂದರೆಯಾಗಬಹುದು. ಖಾಸಗಿ ಟ್ಯಾಂಕರ್‌ಗಳವರು ಅವ್ಯವಹಾರದಲ್ಲಿ ತೊಡಗಿದ್ದಲ್ಲಿ ಅಂತಹವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಸಚಿವ ಜಾರ್ಜ್ ಅವರು ತಿಳಿಸಿದರು.

ನೀರು ಪೂರೈಕೆ ಮಾಡುವಾಗ ಅನಗತ್ಯ ನೀರು ಸೋರಿಕೆಯಾಗುತ್ತಿದ್ದು ಇದನ್ನು ತಡೆಗಟ್ಟಲು ತನಿಖಾದಳ ರಚಿಸಲಾಗಿದೆ ಎಂದ ಸಚಿವರು ಬೆಂಗಳೂರು ನಗರದಲ್ಲಿ ಸುಮಾರು 100 ಬೋರ್‌ವೆಲ್‌ಗಳನ್ನು ಕೊರೆಸಲಾಗುವುದು. ಅಲ್ಲದೆ ಬೆಂಗಳೂರು ಹೊರವಲಯಗಳಲ್ಲಿ ಬರುವ 110 ಗ್ರಾಮಗಳಿಗೆ ನೀರು ಸರಬರಾಜು ಮಾಡಲು ಬೆಂಗಳೂರು ಬೃಹತ್ ಮಹಾನಗರ ಪಾಲಿಕೆಗೆ ವಹಿಸಿದ್ದು, ಇದಕ್ಕಾಗಿ ಮೂರು ಕೋಟಿ ರೂ. ಹಣವನ್ನು ಕಾಯ್ದಿರಿಸಲಾಗಿದೆ ಎಂದ ಸಚಿವ ಕೆ.ಜೆ. ಜಾರ್ಜ್ ಅವರು  ನೀರಿನ ಕೊರತೆ ಹೆಚ್ಚು ಇರುವ ಕಡೆ ತಕ್ಷಣ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರಕ್ಕೆ ವಾರ್ಷಿಕ 19 ಟಿ.ಎಂ.ಸಿ. ನೀರು ಹಂಚಿಕೆಯಾಗಿದ್ದು, ನಿತ್ಯ 1400 ಎಂಎಲ್‌ಡಿ ನೀರನ್ನು ನಗರಕ್ಕೆ ತರಲಾಗುತ್ತಿದೆ. ಇದಕ್ಕಾಗಿ ಹೇಮಾವತಿ, ಹಾರಂಗಿ, ಕಬಿನಿ ಹಾಗೂ ಕೆ.ಆರ್.ಎಸ್. ಜಲಾಶಯಗಳಿಂದ ಸುಮಾರು 11.75 ಟಿ.ಎಂ.ಸಿ. ನೀರು ದೊರೆಯುವ ಸಾಧ್ಯತೆ ಇದೆ ಎಂದು ಮಾತನಾಡಿದ ಸಚಿವರು ವಿಪತ್ತು ನಿರ್ವಹಣಾ ಕಾಯ್ದೆಯಡಿ ಖಾಸಗಿ ಟ್ಯಾಂಕರ್‌ಗಳನ್ನು ಬೆಂಗಳೂರು ಜಲಮಂಡಳಿಗೆ ಹಸ್ತಾಂತರಿಸಲು ಬಿ.ಬಿ.ಎಂ.ಪಿ. ಹಾಗೂ ಬೆಂಗಳೂರು ನಗರ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

## ಸ್ಟೀಲ್ ಬ್ರಿಡ್ಜ್ ಯೋಜನೆ ಕೈಬಿಡಲು ನಿರ್ಧಾರ:

ನಗರದ ಸಂಚಾರ ದಟ್ಟಣೆ ನಿಯಂತ್ರಿಸಲು ನಗರದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದ್ದ ಸ್ಟೀಲ್ ಬ್ರಿಡ್ಜ್ ಯೋಜನೆಯನ್ನು ಕೈಬಿಡುವುದಾಗಿ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್ ಅವರು ಸಭೆಯ ನಂತರ ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದರು.

ಸ್ಟೀಲ್ ಬ್ರಿಡ್ಜ್ ನಿರ್ಮಾಣದಲ್ಲಿ ಅವ್ಯವಹಾರ, ಭ್ರಷ್ಟಾಚಾರ, ನಡೆದಿದೆ ಎಂದು ವಿರೋದ ಪಕ್ಷಗಳು ಹಾಗೂ ಕೆಲವು ಸಂಘ ಸಂಸ್ಥೆಗಳು ಆರೋಪ ಮಾಡಿರುವ ಹಿನ್ನೆಲೆಯಲ್ಲಿ ಸರ್ಕಾರ ಕಳಂಕರಹಿತವಾಗಿರಬೇಕು ಎಂಬ ಹಿನ್ನೆಲೆಯಲ್ಲಿ ಈ ಯೋಜನೆಯನ್ನು ರದ್ದುಗೊಳಿಸಲಾಗಿದೆ ಎಂದು ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ಸ್ಟೀಲ್ ಬ್ರಿಡ್ಜ್ ನಿರ್ಮಾಣದಲ್ಲಿ ಸರ್ಕಾರ ಲಂಚ ಪಡೆದಿದೆ ಎಂದು ವಿರೋಧ ಪಕ್ಷಗಳು ಸುಮ್ಮನೆ ಆರೋಪ ಮಾಡುತ್ತಾರೆ. ಅವರಲ್ಲಿ ಸಾಕ್ಷ್ಯಾಧಾರಗಳು ಇದ್ದಲ್ಲಿ ನೀಡಲಿ ಎಂದು ತಿಳಿಸಿದ ಸಚಿವರು, ನಮ್ಮ ಸರ್ಕಾರ ಜನಹಿತ ಕಾರ್ಯಕ್ರಮ ಮಾಡಲು ಹಾಗೂ ಬೆಂಗಳೂರು ಅಭಿವೃದ್ಧಿಗೆ ಹಲವು ಕಾರ್ಯಕ್ರಮಗಳನ್ನು ಅನುಷ್ಠಾನಮಾಡಲು ಹೊರಟಿರುವುದನ್ನು ಸಹಿಸದ ವಿರೋಧ ಪಕ್ಷಗಳು ಸುಮ್ಮನೆ ಸುಳ್ಳು ಆರೋಪ ಮಾಡುತ್ತಿವೆ ಎಂದರು.

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಕೃಷಿ ಸಚಿವ ಕೃಷ್ಣಬೈರೇಗೌಡ, ವಸತಿ ಸಚಿವ ಕೃಷ್ಣಪ್ಪ, ಯೋಜನೆ ಮತ್ತು ಸಾಂಖ್ಯಿಕ ಸಚಿವ ಎಂ.ಆರ್. ಸೀತಾರಾಂ, ಬಿ.ಬಿ.ಎಂ.ಪಿ. ಮಹಾಪೌರರಾದ ಪದ್ಮಾವತಿ, ಸಂಸದರುಗಳಾದ ರಾಜೀವ್‌ಗೌಡ, ಕೆ.ಸಿ. ರಾಮಮೂರ್ತಿ, ಶಾಸಕರುಗಳಾದ ದಿನೇಶ್‌ಗುಂಡೂರಾವ್, ಮುನಿರತ್ನ, ಗೋಪಾಲಯ್ಯ, ಅವರಿಂದ ಲಿಂಬಾವಳಿ, ವಿಜಯಕುಮಾರ್ ಸೇರಿದಂತೆ ಹಲವು ಶಾಸಕರು ಬೆಂಗಳೂರು ಜಲಮಂಡಳಿಯ ಹಿರಿಯ ಅಧಿಕಾರಿಗಳು, ಬಿ.ಬಿ.ಎಂ.ಪಿ. ಆಯುಕ್ತರು, ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಉನ್ನತ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಚರ್ಚಿಸಿದರು.

ಎಂಆರ್‌ಎಂ/ಕೆಪಿಪಿ/ಕೆಎಂ

## ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿ ಭೇಟಿ

**ಬೆಂಗಳೂರು, ಮಾರ್ಚ್ 2, (ಕರ್ನಾಟಕ ವಾರ್ತೆ)**

ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯು ಮಾರ್ಚ್ 8 ರಂದು ಬೆಳಿಗ್ಗೆ 10.00 ಗಂಟೆಗೆ ದಕ್ಷಿಣ ಕನ್ನಡ (ಮಂಗಳೂರು) ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಭೆ ಸೇರಿ, ದಕ್ಷಿಣ ಕನ್ನಡ ಜಿಲ್ಲೆಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಜನಾಂಗದವರ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿದೆ. ಅದೇ ದಿನ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತ ಸಮುದಾಯದವರ ವಿದ್ಯಾರ್ಥಿ ವಸತಿ

ನಿಲಯಗಳಿಗೆ ಹಾಗೂ ಸಮುದಾಯದವರ ವಿದ್ಯಾರ್ಥಿ ನಿಲಯಗಳಿಗೆ ಹಾಗೂ ಸಮುದಾಯ ಭವನ/ಶಾದಿಮಹಲ್‌ಗಳಿಗೆ ಭೇಟಿ ನೀಡಿ ಪರಿವೀಕ್ಷಣೆ ನಡೆಸಲಿದೆ.

ಮಮತ/ಕೆಎಂ

## ಶೀಘ್ರಲಿಪಿಗಾರರ ಹುದ್ದೆಗೆ ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 2, (ಕರ್ನಾಟಕ ವಾರ್ತೆ)

ಕಲಬುರಗಿ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯದಲ್ಲಿ ಶೀಘ್ರಲಿಪಿಗಾರರ ಹುದ್ದೆಗೆ. ಈ ಹಿಂದೆ 05 ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಪ್ರಸ್ತುತ ರಾಜ್ಯ ಉಚ್ಚ ನ್ಯಾಯಾಲಯವು ಈ ಹಿಂದಿನ 5 ಹುದ್ದೆಗಳು ಸೇರಿದಂತೆ ಒಟ್ಟು 8 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿರುವುದರಿಂದ 8 ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಹಿಂದೆ 30-1-2017 ರಂದು ನೀಡಿದ್ದ ಪ್ರಕಟಣೆಯಲ್ಲಿ ಮೇಲಿನ ಬದಲಾವಣೆ ಹೊರತುಪಡಿಸಿ ಉಳಿದ ಯಾವುದೇ ಬದಲಾವಣೆಗಳಿರುವುದಿಲ್ಲವೆಂದು ಮುಖ್ಯ ಆಡಳಿತಾಧಿಕಾರಿ, ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯ, ಕಲಬುರಗಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಮತ/ಕೆಎಂ

## ರಾಜ್ಯದಲ್ಲಿ 21 ಲಕ್ಷ ಹೆಕ್ಟೇರ್ ಬೀಳು ಭೂಮಿ- ಕೃಷಿ ಬೆಲೆ ಆಯೋಗದ ಅಧ್ಯಕ್ಷ

ಬೆಂಗಳೂರು, ಮಾರ್ಚ್ 2, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಸುಮಾರು 21 ಲಕ್ಷ ಹೆಕ್ಟೇರಷ್ಟು ಬೇಸಾಯ ಭೂಮಿಯನ್ನು ಹಲವಾರು ಕಾರಣಗಳಿಂದ ಬಳಸದೆ ಬೀಳು ಬಿಡಲಾಗಿದೆ. ಇದು ರಾಜ್ಯದ ಕೃಷಿ ಅಭಿವೃದ್ಧಿಗೆ ತೀವ್ರ ಅಡಚಣೆಯಾಗಿರುವುದರಿಂದ ಈ ನಿಟ್ಟಿನಲ್ಲಿ ಸಮಗ್ರ ಅಧ್ಯಯನ ನಡೆಸಿ ಸೂಕ್ತ ಪರಿಹಾರ ಕ್ರಮಗಳನ್ನು ರೂಪಿಸುವ ಜವಾಬ್ದಾರಿಯನ್ನು ಕೃಷಿ ಬೆಲೆ ಆಯೋಗಕ್ಕೆ ವಹಿಸಲಾಗಿದೆ. ಆದ್ದರಿಂದ ಅಗತ್ಯ ಮಾಹಿತಿ ಅಂಕಿ ಅಂಶಗಳನ್ನು ಕಲೆ ಹಾಕಿ ರಾಜ್ಯದ ವಿವಿದೆಡೆ ಭೂಮಿಯನ್ನು ಬೀಳು ಬಿಟ್ಟಿರುವ ಕೃಷಿಕರನ್ನು ಸಂಪರ್ಕಿಸಿ ಮಾಹಿತಿ ಪಡೆದು ಅಧ್ಯಯನ ನಡೆಸಲಾಗಿರುತ್ತದೆ ಎಂದು ಕೃಷಿ ಬೆಲೆ ಆಯೋಗದ ಅಧ್ಯಕ್ಷ ಪ್ರಕಾಶ್ ಕಮ್ಮರಡಿ ತಿಳಿಸಿದರು.

ಇಂದು ಬೆಂಗಳೂರಿನ ಕೃಷಿ ಇಲಾಖೆಯ ಆವರಣದ ಸಮೃದ್ಧಿ ಸಭಾಂಗಣದಲ್ಲಿ ಪ್ರಸ್ತಾವಿಕ ಭಾಷಣ ಮಾಡುತ್ತಾ, ಕೇಂದ್ರ ಸರ್ಕಾರದ ನೀತಿ ಆಯೋಗವು ರೈತರು ಕೃಷಿ ಮಾಡಲು

ಕಷ್ಟವಾದಲ್ಲಿ ಆಸ್ತಿ ಹಕ್ಕಿಗೆ ಚ್ಯುತಿ ಬರದ ರೀತಿಯಲ್ಲಿ ಭೂಮಿಯನ್ನು ಗುತ್ತಿಗೆಗೆ ನೀಡಲು ಅನುವು ಮಾಡಿಕೊಡುವ ನಿಟ್ಟಿನಲ್ಲಿ ಮಾದರಿ ಕಾಯ್ದೆಯನ್ನು ಈಗಾಗಲೇ ರೂಪಿಸಿರುತ್ತದೆ ಎಂದರು.

ಭೂ ರಹಿತರಿಗೆ ಮತ್ತು ಅತೀ ಸಣ್ಣ ರೈತರಿಗೆ ಭೂಮಿಯನ್ನು ಹೊಂದಲು ಅವಕಾಶ ನೀಡುವ ರೀತಿಯಲ್ಲಿ ಭೂಮಿ ದೇಣಿಯನ್ನು ಸುಲಭಗೊಳಿಸುವ ಹಾಗೂ ಸಾಧ್ಯಮಾಡಿಕೊಡುವ ಪ್ರಯತ್ನವನ್ನು ಮಾಡಿದೆ ಎಂದು ಕೇಂದ್ರ ಸರ್ಕಾರದ ನೀತಿ ಆಯೋಗವು ಕೃಷಿ ವೆಚ್ಚ ಮತ್ತು ಬೆಲೆ ಆಯೋಗದ ಮಾಜಿ ಅಧ್ಯಕ್ಷ ಡಾ: ಟಿ. ಹಕ್ ಅವರು ತಿಳಿಸಿದರು. ಇವರ ಅಧ್ಯಕ್ಷತೆಯಲ್ಲಿ ರಚಿಸಿದ ಭೂಮಿ ಗೇಣಿ ತಜ್ಞರ ಸಮಿತಿಯು ಮಾದರಿ ಕೃಷಿ ಭೂಮಿ ಗೇಣಿ 2016ರ ಅಧಿನಿಯಮವನ್ನು ಸರ್ಕಾರಕ್ಕೆ ಸಲ್ಲಿಸಿದೆ.

ಈ ಕಾರ್ಯಾಗಾರದಲ್ಲಿ ರೈತ ಪ್ರತಿನಿಧಿಗಳು, ತಜ್ಞರು, ಅಧಿಕಾರಿಗಳು ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು ಮತ್ತಿತತರು ಭಾಗವಹಿಸಿದ್ದರು.

ಎಂಆರ್‌ಎಂ/ಕೆವಿ/ಕೆಎಂ

# ಮಾರ್ಚ್ 3 ರಂದು ವಿಶ್ವ ಶ್ರವಣ ದಿನಾಚರಣೆ

ಬೆಂಗಳೂರು, ಮಾರ್ಚ್ 3 (ಕರ್ನಾಟಕ ವಾರ್ತೆ)

ತಡೆಗಟ್ಟಬಹುದಾದ ಕಿವುಡುತನದ ಬಗ್ಗೆ ಅರಿವನ್ನುಂಟುಮಾಡುವ ಸಂಬಂಧ ಮಾರ್ಚ್ 3 ರಂದು ವಿಶ್ವಾದಾದ್ಯಂತ ಶ್ರವಣ ದಿನವನ್ನಾಗಿ ಆಚರಣೆ ಮಾಡಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಕರ್ನಾಟಕ ಜನಸಂಖ್ಯೆಯಲ್ಲಿ ಸುಮಾರು ಶೇ 5.3 ಜನರಿಗೆ ಅಂದರೆ ಸುಮಾರು 33 ಲಕ್ಷ ಜನರಿಗೆ ಶ್ರವಣ ಸಮಸ್ಯೆ ಇದೆ ಎಂದು ಅಂದಾಜು ಮಾಡಲಾಗಿದೆ. ಅದರಲ್ಲಿ ಸುಮಾರು 3 ಲಕ್ಷ ಮಕ್ಕಳಿಗೆ ಸಮಸ್ಯೆ ಇದೆ ಎಂದು ಅಂದಾಜಿಸಲಾಗಿದೆ.

ಶ್ರವಣ ಸಮಸ್ಯೆ ಬಗ್ಗೆ ಅರಿವನ್ನು ಉಂಟು ಮಾಡಿ ಶ್ರೀಘವಾಗಿ ಪತ್ತೆ ಹಚ್ಚಿದಲ್ಲಿ, ಧೀರ್ಘಕಾಲದ ಕಿವುಡುತನವನ್ನು ತಡೆಗಟ್ಟಬಹುದಾಗಿದೆ. ಕರ್ನಾಟಕ ಸರ್ಕಾರವು ರಾಷ್ಟ್ರೀಯ ಶ್ರವಣ ದೋಷ ನಿಯಂತ್ರಣ ಮತ್ತು ನಿವಾರಣಾ ಕಾರ್ಯಕ್ರಮ ಅನುಷ್ಠಾನಗೊಳಿಸುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ಕಾರ್ಯಕ್ರಮ 30 ಜಿಲ್ಲೆಗಳಲ್ಲಿ ಅನುಷ್ಠಾನವಿದ್ದು, 19 ಜಿಲ್ಲೆಗಳಲ್ಲಿ ಅಡಿಯೋಲಾಜಿಸ್ಟ್, ಅಡಿಯೋಮೆಟ್ರಿಕ್ ಅಸಿಸ್ಟೆಂಟ್ ಹಾಗೂ ಇನ್ಸಟ್ರಕ್ಟರ್‌ಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಈ

ಜಿಲ್ಲೆಗಳಲ್ಲಿ ಈಗಾಗಲೇ 39,686 ಜನರಿಗೆ ಶ್ರವಣ ಪರೀಕ್ಷೆಯನ್ನು ಮಾಡಿದ್ದಾರೆ ಅದರಲ್ಲಿ 6765 ಜನರಿಗೆ ಪುನಶ್ಚೇತನಗೊಳಿಸಿದ್ದಾರೆ. 1,871 ಜನರಿಗೆ ಶ್ರವಣ ಯಂತ್ರವನ್ನು ಅಳವಡಿಸಿರುತ್ತಾರೆ ಹಾಗೂ 498 ಜನರಿಗೆ ಶಸ್ತ್ರಚಿಕ್ಸಿತೆಯನ್ನು ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಉಳಿದ ಜಿಲ್ಲೆಗಳಿಗೆ ಅಡಿಯೋಲಾಜಿಸ್ಟ್‌ಗಳನ್ನು ಆಯ್ಕೆಮಾಡಿ, ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಶ್ರವಣ ಪರೀಕ್ಷೆಯನ್ನು ಮಾಡಲಾಗುವುದು.

ಉಚಿತ ತಪಾಸಣೆ, ಉಚಿತ ವೈದ್ಯಕೀಯ ಚಿಕಿತ್ಸೆ, ಉಚಿತ ಶಸ್ತ್ರ ಚಿಕಿತ್ಸೆ, ಉಚಿತ ಶ್ರವಣ ಯಂತ್ರ ವಿತರಣೆ ಹಾಗೂ ವಾಕ್ ಮತ್ತು ಶ್ರವಣ ಪುನ:ಶ್ಚೇತನ ಕಾರ್ಯಕ್ರಮದ ವಿಶೇಷ ಸೇವೆಗಳಾಗಿವೆ.

ಈ ಎಲ್ಲಾ ಸೇವೆಗಳು ಉಚಿತವಾಗಿ ಎಲ್ಲಾ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಲಭ್ಯವಿರುವುದು. ಸಾರ್ವಜನಿಕರು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 104 ಅನ್ನು ಸಂಪರ್ಕಿಸಬಹುದಾಗಿದೆ.

ಎಂಆರ್‌ಎಂ:ಜಿಪಿಆರ್.